# ಕುವೆಂಪು ವಿಶ್ವವಿದ್ಯಾಲಯ

Accredited by NAAC With "A" Grade, 73rd All India Rankings (NIRF) 2019, Four Star KSURF 2019 and secured 45th Place in SCIMAGO Institutional Rankings

**ಡಾ. ಉದ್ದಗಟ್ಟಿ ವೆಂಕಟೇಶ್** — **ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡಗಳ ಅಭಿವೃದ್ಧಿಘಟಕ**

*ಸಂಚಾಲಕರು* — **ಜ್ಞಾನಸಹ್ಯಾದ್ರಿ, ಶಂಕರಘಟ್ಟ.**

*ಮೊಬೈಲ್ ಸಂಖ್ಯೆ: 9980190713* — **ದೂ: 08282-256329**

ಇಮೈಲ್: **scstcellkuvempu@gmail.com**


ಸಂಖ್ಯೆ: ಕುವಿ:ಪ.ಜಾ:ಪ.ಪಂ.ಘ/153/2025-26 ದಿನಾಂಕ:05-11-2025

## ಸುತ್ತೋಲೆ

ವಿಷಯ: ಸಮಾಜ ಕಲ್ಯಾಣ ಇಲಾಖಾವತಿಯಿಂದ ಅನುಷ್ಠಾನ ಮಾಡಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ (SC/ST) ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ಆಧಾರ್ ಆಧಾರಿತ Biometric e-authentication ಪ್ರಕ್ರಿಯೆಗೆ ಒಳಪಡಿಸುವ ಕುರಿತು.

ಉಲ್ಲೇಖ: ಸಂ. ಸನಿ(ಗ್ರೇ-1)/ಸಕಇಭ/ಮೆ.ನಂ.ವಿ.ವೇ/ಸಿಆರ್/2025-26, ದಿನಾಂಕ:04-11-2025.

-*****-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು, ಇವರ ಸುತ್ತೋಲೆಯಂತೆ, 2025-26ನೇ ಸಾಲಿನಲ್ಲಿ ಎಲ್ಲಾ ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಕೇಂದ್ರದ ಪಾಲಿನ ಶೇಕಡ 60ರಷ್ಟು ಮೊತ್ತ ವಿದ್ಯಾರ್ಥಿವೇತನ ಪಡೆಯಲು ಎಲ್ಲಾ ಅರ್ಹ ವಿದ್ಯಾರ್ಥಿಗಳ ಆಧಾರ್ ಆಧಾರಿತ ಬಯೋಮೆಟ್ರಿಕ್ ಇ-ದೃಢೀಕರಣ ಕಡ್ಡಾಯವಾಗಿರುತ್ತದೆ.

ವಿದ್ಯಾರ್ಥಿವೇತನ ಕೋರಿ ಅರ್ಜಿಯನ್ನು ಸಲ್ಲಿಸಿರುವ ಹಾಗೂ ಅರ್ಜಿ ಸಲ್ಲಿಸಲು ಸಾಧ್ಯವಾಗದಿರುವ ವಿದ್ಯಾರ್ಥಿಗಳಿಂದ NSP OTR ಮೂಲಕ ಇ-ದೃಢೀಕರಣ ಮಾಡುವುದು ಹಾಗೂ ಆಧಾರ್ ಆಧಾರಿತ Biometric e-authentication ಮಾಡುವುದು ಕಡ್ಡಾಯವಾಗಿರುತ್ತದೆ. ಆದ್ದರಿಂದ, ತಮ್ಮ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ (SC/ST) ವಿದ್ಯಾರ್ಥಿಗಳು ವಿದ್ಯಾರ್ಥಿವೇತನ ಅಭಿಯಾನ ಮತ್ತು ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲು ಕೋರುತ್ತಿದ್ದು, ಸಮಾಜ ಕಲ್ಯಾಣ ಇಲಾಖೆ ಭದ್ರಾವತಿ, ಕಛೇರಿಯ ಅಧಿಕಾರಿಗಳು ಮತ್ತು ಸಂಪನ್ಮೂಲ ವ್ಯಕ್ತಿಗಳು ಕಾರ್ಯಾಗಾರದಲ್ಲಿ ಹಾಜರಿದ್ದು ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಪರಿಹಾರ ಕ್ರಮಗಳನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ **ದಿನಾಂಕ: 07-11-2025 ರಂದು ಬೆಳಿಗ್ಗೆ 11-00ಗಂಟೆಗೆ ಪ್ರೊ. ಎಸ್.ಪಿ. ಹಿರೇಮಠ್ ಸಭಾಂಗಣದಲ್ಲಿ** ಹಾಜರಿರುವಂತೆ ತಿಳಿಸಲು ಕೋರಲಾಗಿದೆ.

ಸಂಚಾಲಕರು

ಸಂಚಾಲಕರು
ಪರಿಶಿಷ್ಟಜಾತಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಘಟಕ
ಕುವೆಂಪು ವಿಶ್ವವಿದ್ಯಾಲಯ
ಜ್ಞಾನಸಹ್ಯಾದ್ರಿ, ಶಂಕರಘಟ್ಟ - 577 451.
ಶಿವಮೊಗ್ಗ ಜಿಲ್ಲೆ.

ಗೆ,

1. **ಅಧ್ಯಕ್ಷರು,** ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ /ಶಿವಮೊಗ್ಗ / ಕಡೂರು / ಚಿಕ್ಕಮಗಳೂರು.

ಕರ್ನಾಟಕ ಸರ್ಕಾರ

**ಸಹಾಯಕ ನಿರ್ದೇಶಕರು (ಗ್ರೇಡ್-1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ,**
**ತಾಲ್ಲೂಕು ಪಂಚಾಯತ್ ಹಿಂಭಾಗ, ಭದ್ರಾವತಿ.**

**ದೂರವಾಣಿ ಸಂಖ್ಯೆ:** 08282 263761 E-mail- tswbdvt1@gmail.com

ಸಂ: ಸನಿ(ಗ್ರೇ-1)/ಸಕಇಭ/ಮೆ.ನಂ.ವಿ.ವೇ/ಬಿ.ಆರ್ /2025-26 ದಿನಾಂಕ: 04.11.2025.

ಗೆ;

ಮಾನ್ಯ ಕುಲಸಚಿವರು,
ಕುವೆಂಪು ವಿಶ್ವವಿದ್ಯಾನಿಲಯ,
ಶಂಕರಘಟ್ಟ, ಭದ್ರಾವತಿ ತಾಲ್ಲೂಕು.

ಮಾನ್ಯರೇ,

**ವಿಷಯ:-** ಸಮಾಜ ಕಲ್ಯಾಣ ಇಲಾಖಾವತಿಯಿಂದ ಅನುಷ್ಠಾನ ಮಾಡಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ಆದಾರ್ ಆಧಾರಿತ Biometric e-authentication ಪ್ರಕ್ರಿಯೆಗೆ ಒಳಪಡಿಸುವ ಕುರಿತು.

**ಉಲ್ಲೇಖ:-** ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರುರವರ ಸುತ್ತೋಲೆ ಪತ್ರ ಸಂಖ್ಯೆ: SWD/SCHC/SC/155/2024/1513564, ದಿನಾಂಕ: 31-10-2025.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರುರವರ ಸುತ್ತೋಲೆಯಂತೆ, 2025-26ನೇ ಸಾಲಿನಲ್ಲಿ ಎಲ್ಲಾ ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಕೇಂದ್ರದ ಪಾಲಿನ ಶೇಕಡ 60 ರಷ್ಟು ಮೊತ್ತ ವಿದ್ಯಾರ್ಥಿವೇತನ ಪಡೆಯಲು ಎಲ್ಲಾ ಅರ್ಹ ವಿದ್ಯಾರ್ಥಿಗಳ ಆಧಾರ್ ಆಧಾರಿತ ಬಯೋಮೆಟ್ರಿಕ್ ಇ-ದೃಢೀಕರಣ ಕಡ್ಡಾಯವಾಗಿರುತ್ತದೆ. ಆದರೆ ಬಯೋಮೆಟ್ರಿಕ್ ಇ-ದೃಢೀಕರಣ ಪ್ರಗತಿಯು ತುಂಬಾ ಕುಂಠಿತವಾಗಿದ್ದು, ಒಂದು ವೇಳೆ ಅರ್ಹ ವಿದ್ಯಾರ್ಥಿಯು ಬಯೋಮೆಟ್ರಿಕ್ ಇ-ದೃಢೀಕರಣಕ್ಕೆ ಒಳಪಡದೇ ಇದ್ದಲ್ಲಿ ಕೇಂದ್ರದ ಪಾಲಿನ ಶೇಕಡ 60 ರಷ್ಟು ಮೊತ್ತದಿಂದ ವಂಚಿತರಾಗಲಿದ್ದಾರೆ. ಈ ಹಿನ್ನೆಲೆಯಲ್ಲಿ ಎಲ್ಲಾ ಅರ್ಹ ವಿದ್ಯಾರ್ಥಿಗಳು ಈ ಕೂಡಲೇ ಬಯೋಮೆಟ್ರಿಕ್ ಇ-ದೃಢೀಕರಣಕ್ಕೆ ಒಳಪಡುವ ಸಂಬಂಧ ಸಮಾಜ ಕಲ್ಯಾಣ ಇಲಾಖಾವತಿಯಿಂದ ಅನುಷ್ಠಾನ ಮಾಡಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ಆದಾರ್ ಆಧಾರಿತ Biometric e-authentication ಪ್ರಕ್ರಿಯೆಗೆ ಒಳಪಡಿಸಲು ತಮ್ಮ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಜಿ ಸಲ್ಲಿಸುವಂತೆ ಕ್ರಮವಹಿಸುವುದು.

ಅದರಂತೆ, ಈ ಕೆಳಕಂಡ ಇಲಾಖಾ ವಾರ್ಡನ್ ಮತ್ತು ಕಛೇರಿ ಸಿಬ್ಬಂದಿಗಳು ದಿನಾಂಕ, 07.11.2025 ರಂದು ತಮ್ಮಲ್ಲಿ ಹಾಜರಾಗಿ ವಿದ್ಯಾರ್ಥಿವೇತನ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಆಧಾರ್ ಆಧಾರಿತ Biometric e-authentication ಪಡೆಯಲಿದ್ದು, ಸದರಿ ಅಭಿಯಾನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವಂತೆ ಕ್ರಮವಹಿಸಲು ಕೋರಿದೆ.

ತಮ್ಮ ವಿಶ್ವಾಸಿ

**ಸಹಾಯಕ ನಿರ್ದೇಶಕರು (ಗ್ರೇಡ್-1),**
ಸಮಾಜ ಕಲ್ಯಾಣ ಇಲಾಖೆ,
ಭದ್ರಾವತಿ ತಾಲ್ಲೂಕು.

ಪ್ರತಿಯನ್ನು :

1. ಮಾನ್ಯ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಶಿವಮೊಗ್ಗ. ರವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ
ಸಹಾಯಕ ನಿರ್ದೇಶಕರು (ಗ್ರೇಡ್–1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ,
ತಾಲ್ಲೂಕು ಪಂಚಾಯತ್ ಹಿಂಭಾಗ, ಭದ್ರಾವತಿ.

ದೂರವಾಣಿ ಸಂಖ್ಯೆ: 08282 263761 E-mail- tswbdvt1@gmail.com

ಸಂ: ಸನಿ(ಗ್ರೇ–1)/ಸಕಇಭ/ಮೆ.ನಂ.ವಿ.ವೇ/ಸಿ.ಆರ್ /2025–26 ದಿನಾಂಕ: 04.11.2025.

## : ಕಛೇರಿ ಆದೇಶ :

ವಿಷಯ:– ಸಮಾಜ ಕಲ್ಯಾಣ ಇಲಾಖಾವತಿಯಿಂದ ಅನುಷ್ಠಾನ ಮಾಡಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ಆಧಾರ್ ಆಧಾರಿತ Biometric e-authentication ಪ್ರಕ್ರಿಯೆಗೆ ಒಳಪಡಿಸುವ ಕುರಿತು.

ಉಲ್ಲೇಖ:– ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರುರವರ ಸುತ್ತೋಲೆ ಪತ್ರ ಸಂಖ್ಯೆ: SWD/SCHC/SC/155/2024/ 1513564, ದಿನಾಂಕ: 31–10–2025.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಮಾನ್ಯ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರುರವರ ಸುತ್ತೋಲೆಯಂತೆ, 2025–26ನೇ ಸಾಲಿನಲ್ಲಿ ಎಲ್ಲಾ ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಕೇಂದ್ರದ ಪಾಲಿನ ಶೇಕಡ 60 ರಷ್ಟು ಮೊತ್ತ ವಿದ್ಯಾರ್ಥಿವೇತನ ಪಡೆಯಲು ಎಲ್ಲಾ ಅರ್ಹ ವಿದ್ಯಾರ್ಥಿಗಳ ಆಧಾರ್ ಆಧಾರಿತ ಬಯೋಮೆಟ್ರಿಕ್ ಇ–ದೃಢೀಕರಣ ಕಡ್ಡಾಯವಾಗಿರುತ್ತದೆ.

ವಿದ್ಯಾರ್ಥಿ ವೇತನ ಕೋರಿ ಅರ್ಜಿಯನ್ನು ಸಲ್ಲಿಸಿರುವ ವಿದ್ಯಾರ್ಥಿಗಳಿಂದ NSP OTR ಮೂಲಕ ಇ–ದೃಢೀಕರಣ ಮಾಡುವುದು ಹಾಗೂ ಆಧಾರ್ ಆಧಾರಿತ Biometric e-authentication ಮಾಡುವುದು ಕಡ್ಡಾಯವಾಗಿರುವುದರಿಂದ ತಮ್ಮ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಕ್ರಮವಹಿಸುವುದು.

ಅದರಂತೆ, ಈ ಕೆಳಕಂಡ ಕಛೇರಿ ಸಿಬ್ಬಂದಿಗಳು ದಿನಾಂಕ, 07.11.2025 ರಂದು ಬೆಳಿಗ್ಗೆ 10.30 ರಿಂದ ಸಂಜೆ 5.30ರವರೆಗೆ ತಮ್ಮಲ್ಲಿ ಹಾಜರಾಗಿ ವಿದ್ಯಾರ್ಥಿ ವೇತನ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ NSP OTR ಮೂಲಕ ಇ–ದೃಢೀಕರಣ ಹಾಗೂ ಆಧಾರ್ ಆಧಾರಿತ Biometric e-authentication ಪಡೆಯಲಿದ್ದು, ಸದರಿ ಅಭಿಯಾನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವಂತೆ ಕ್ರಮವಹಿಸಲು ಕೋರಿದೆ.

| ಕ್ರಸಂ | ನಿಯೋಜಿತ ಸಿಬ್ಬಂದಿಗಳ ವಿವರ |
|---|---|
| 1 | ಸವಿತ ಕೆ.ಎಸ್. ಕಛೇರಿ ವ್ಯವಸ್ಥಾಪಕರು |
| 2 | ವೀಣಾ ಎಂ., ದತ್ತಾಂಶ ನಮೂದು ಸಹಾಯಕರು |
| 3 | ಅನಿತ ಕೆ., ಕಂಪ್ಯೂಟರ್ ಆಪರೇಟರ್ |
| 4 | ಶಶಾಂಕ್ ಪವಾರ್, ಕಂಪ್ಯೂಟರ್ ಆಪರೇಟರ್ |
| 5 | ಸುಪ್ರಿಯಾ, ಕಂಪ್ಯೂಟರ್ ಆಪರೇಟರ್ |

ತಮ್ಮ ವಿಶ್ವಾಸಿ

ಸಹಾಯಕ ನಿರ್ದೇಶಕರು (ಗ್ರೇಡ್–1),
ಸಮಾಜ ಕಲ್ಯಾಣ ಇಲಾಖೆ,
ಭದ್ರಾವತಿ ತಾಲ್ಲೂಕು.

ಪ್ರತಿಯನ್ನು :

1. ಮಾನ್ಯ ಕುಲಸಚಿವರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ, ಭದ್ರಾವತಿ ತಾಲ್ಲೂಕು. ರವರಿಗೆ
2. ಮಾನ್ಯ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಶಿವಮೊಗ್ಗ. ರವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.